157ಪುಟ = (91)
LKK
14012б

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಕೆ. ಹರಿಪ್ರಸಾದ್ ರವರ ನಿಯಮ 330 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ.**

## ಸೂಚನೆ

ಕರ್ನಾಟಕ ರಾಜ್ಯದಲ್ಲಿ ಅಳಿವಿನಂಚಿಗೆ ಸೇರುತ್ತಿರುವ ಅತ್ಯಂತ ಪ್ರಾಚೀನ ಬುಡಕಟ್ಟುಗಳು ಮತ್ತು ಕರ್ನಾಟಕ ರಾಜ್ಯದ ಅರಣ್ಯ ಮತ್ತು ಅರಣ್ಯದಂಚಿನಲ್ಲಿ ವಾಸಿಸುತ್ತಿರುವ ಜೇನುಕುರುಬ, ಕೊರಗ, ಇರುಳಿಗ, ಸೋಲಿಗ, ಸಿದ್ದಿ, ಬೆಟ್ಟಕುರುಬ, ಕುಡಿಯ/ಮಲೆಕುಡಿಯ, ಪಣಿಯನ್, ಯರವ, ಹಸಲರು ಮತ್ತು ಗೌಡಲು ಸೇರಿದಂತೆ 12 ಅರಣ್ಯಾಧಾರಿತ ಮೂಲ ಆದಿನಿವಾಸಿ ಬುಡಕಟ್ಟುಗಳ ಅಭಿವೃದ್ಧಿಗಾಗಿ ವಿಶೇಷ ಅಭಿವೃದ್ಧಿ ಯೋಜನೆಗಳನ್ನು ರೂಪಿಸುವ ಜೊತೆಗೆ ಅವುಗಳ ಕಲೆ, ಸಂಸ್ಕೃತಿ, ಭಾಷೆ ಮತ್ತು ಇತರೆ ವಿಷಯಗಳ ಬಗ್ಗೆ ಅಧ್ಯಯನ ಮಾಡಿ, ಈ ಬುಡಕಟ್ಟುಗಳ ಸಂಸ್ಕೃತಿ ಮತ್ತು ಪರಂಪರೆಗಳನ್ನು ಉಳಿಸಿಕೊಳ್ಳಲು ರಾಜ್ಯ ಸರ್ಕಾರದಿಂದ ಸ್ಥಾಪಿಸಲಾಗಿರುವ ಆದಿವಾಸಿಗಳ ಮೂಲ ಅಧ್ಯಯನ ಕೇಂದ್ರವನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಿಂದ ಪ್ರತ್ಯೇಕಿಸಿ, ಆದಿವಾಸಿಗಳ ಮೂಲ ಅಧ್ಯಯನ ಕೇಂದ್ರವನ್ನು ಶಾಸನಬದ್ಧ ಸಂಸ್ಥೆಯನ್ನಾಗಿ ಮಾಡಲು ಪ್ರತ್ಯೇಕ ಅನುದಾನ ನೀಡಿ, ಈ ಕೇಂದ್ರಕ್ಕೆ ಮಂಜೂರಾಗಿರುವ ಹುದ್ದೆಗಳನ್ನು ಭರ್ತಿ ಮಾಡುವುದು ಮತ್ತು ಈ ಕೇಂದ್ರಕ್ಕೆ ಪ್ರತ್ಯೇಕ ಸಿ & ಆರ್ ನಿಯಮಗಳನ್ನು ರೂಪಿಸುವ ಮೂಲಕ ರಾಜ್ಯದಲ್ಲಿ ಅಳಿವಿನಂಚಿನಲ್ಲಿರುವ ಆದಿವಾಸಿಗಳ ಸಮಗ್ರ ಅಭಿವೃದ್ಧಿಗೆ ಒತ್ತು ನೀಡುವಂತೆ ಮಾನ್ಯ ಮುಖ್ಯಮಂತ್ರಿಗಳ ಬಳಿ ಪ್ರಸ್ತಾಪಿಸ ಬಯಸುತ್ತೇನೆ.

## ಉತ್ತರ

ಸರ್ಕಾರದ ಆದೇಶದಂತೆ ಮೂಲ ಆದಿವಾಸಿಗಳ ಅಭಿವೃದ್ಧಿಗಾಗಿ ವಿಶೇಷ ಅಭಿವೃದ್ಧಿ ಯೋಜನೆ ರೂಪಿಸಲು ದಿನಾಂಕ:04-02-2015 ರಲ್ಲಿ ಮೂಲ ಆದಿವಾಸಿ ಅಧ್ಯಯನ ಕೇಂದ್ರವನ್ನು ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಒಂದು ಘಟಕವನ್ನಾಗಿ ಪ್ರಾರಂಭಿಸಲಾಗಿರುತ್ತದೆ. ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಿಂದ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಗೆ ಒದಗಿಸಲಾಗುವ ಒಟ್ಟು ಅನುದಾನದಲ್ಲಿ ಈ ಘಟಕದ ಕಾರ್ಯಕ್ರಮಗಳ ವೆಚ್ಚವನ್ನು ಭರಿಸಲಾಗಿದೆ.

2015 ರಿಂದ 2025ರ ವರೆಗೆ ಮೂಲ ಆದಿವಾಸಿ ಅಧ್ಯಯನ ಕೇಂದ್ರದಿಂದ ಕೈಗೊಂಡಿರುವ ಅಧ್ಯಯನಗಳು ಮತ್ತು ಇತರೆ ಕಾರ್ಯಕ್ರಮಗಳಿಗಾಗಿ ಒಟ್ಟು ರೂ.1,88,58,151.00 ಗಳ ವೆಚ್ಚವನ್ನು ಭರಿಸಲಾಗಿದೆ. 2025-26ನೇ ಸಾಲಿನಲ್ಲಿ ಬೇಡಿಕೆಯನುಸಾರ ರೂ.60.00 ಲಕ್ಷಗಳನ್ನು ಅಧ್ಯಯನ ಮತ್ತು ಚಟುವಟಿಕೆಗಳಿಗೆ ನಿಗಧಿಪಡಿಸಲಾಗಿರುತ್ತದೆ.

ಆದಿವಾಸಿ ಅಧ್ಯಯನ ಕೇಂದ್ರವನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಒಂದು ಘಟಕವನ್ನಾಗಿ ರಚಿಸಿ ಆದೇಶಿಸಿರುವುದರಿಂದ ಪ್ರತ್ಯೇಕ ಸಿ & ಆರ್ ನಿಯಮಗಳನ್ನು ರಚಿಸಲು ಅವಕಾಶವಿರುವುದಿಲ್ಲ.

2025-26ನೇ ಸಾಲಿನ ಆಯವ್ಯಯ ಕಂಡಿಕೆ 199 ರಲ್ಲಿ ಅರಣ್ಯ, ಅರಣ್ಯದಂಚಿನ ಹಾಡಿಗಳಲ್ಲಿ ವಾಸಿಸುತ್ತಿರುವ 13 ಬುಡಕಟ್ಟು ಜನಾಂಗಗಳಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿ ಪ್ರಾತಿನಿಧ್ಯ ನೀಡುವ ಸಲುವಾಗಿ ವಿಶೇಷ ನೇರ ನೇಮಕಾತಿಯನ್ನು ಕೈಗೊಳ್ಳುವ ಪ್ರಕ್ರಿಯೆ ಕುರಿತಂತೆ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುತ್ತದೆ.

STW/SECB/SAD/158/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ